## ದ. ಕನ್ನಡ ಜಿಲ್ಲೆಯಲ್ಲಿ ಸ್ಮಶಾನ ಮತ್ತು ದಫನ್ ಜಾಗ ನಿಗದಿ

**350 (74):** ಶ್ರೀ ಎಂ. ಇದಿನಬ್ಬ, (ಉಳ್ಳಾಲ)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಪ್ರತಿ ಗ್ರಾಮಗಳಲ್ಲೂ ಕಡ್ಡಾಯವಾಗಿ ಸ್ಮಶಾನ ಜಾಗವನ್ನು ಮತ್ತು ದಫನ್ ಜಾಗವನ್ನು ನಿಗದಿಪಡಿಸಲಾಗಿದೆಯೇ ?

ಆ) ಹಾಗೆ ಮಾಡದೆ ಇದ್ದಲ್ಲಿ ಸ್ಮಶಾನ ಮತ್ತು ದಫನ್‌ಗೆ ಜಮೀನು ಒದಗಿಸಿಕೊಡಲಾಗುವುದೇ ಮತ್ತು ಅದನ್ನು ಯಾವಾಗ ಒದಗಿಸಲಾಗುವುದು ?

ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು):

ಅ) ಹೌದು

ಆ) ಎಲ್ಲಿ ಸಾಕಷ್ಟು ಸ್ಮಶಾನ ಭೂಮಿಯಿಲ್ಲವೋ ಅಂತಹ ಕಡೆಗಳಲ್ಲಿ ಸ್ಮಶಾನಕ್ಕಾಗಿ ಸರ್ಕಾರದ ಭೂಮಿಯು ಲಭ್ಯವಿದ್ದರೆ ಕೊಡುವುದಕ್ಕೆ ಅಥವಾ ಖಾಸಗಿ ಜಮೀನನ್ನು ಸ್ವಾಧೀನಪಡಿಸಿಕೊಂಡು ಕೊಡುವುದಕ್ಕೆ ಕ್ರಮ ಕೈಗೊಳ್ಳಲಾಗುವುದು.

## ಚಿತ್ತಾಪುರ ತಾಲ್ಲೂಕಿನ ಸಂಕನೂರು ಗ್ರಾಮಕ್ಕೆ ಕುಡಿಯುವ ನೀರಿನ ಸರಬರಾಜಿನ ವ್ಯವಸ್ಥೆ

**352 (883):** ಶ್ರೀ ಬಸವಂತರೆಡ್ಡಿ ಮೋತಕಪಲ್ಲಿ (ಸೇಡಂ)

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಗುಲ್ಬರ್ಗಾ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಸಂಕನೂರು ಗ್ರಾಮಕ್ಕೆ ಕುಡಿಯುವ ನೀರಿಗಾಗಿ ಕೊಳವೆ ಬಾವಿಯನ್ನು ತೋಡುವ ಯೋಜನೆ ಮಂಜೂರಾಗಿದ್ದು, ಯಾವುದೇ ಕ್ರಮ ತೆಗೆದುಕೊಂಡಿಲ್ಲದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ?

ಆ) ಇಲ್ಲಿಯವರೆವಿಗೆ ಈ ಯೋಜನೆಗೆ ಖರ್ಚಾಗಿರುವ ಹಣವೆಷ್ಟು ?

ಇ) ಕಳೆದ ವರ್ಷದ ಸದನದಲ್ಲಿ ಕುಡಿಯುವ ನೀರಿನ ಸೌಲಭ್ಯವನ್ನು ಈ ಗ್ರಾಮಕ್ಕೆ ಒದಗಿಸುವುದಾಗಿ ಭರವಸೆ ನೀಡಿದ್ದು ಈ ಬಗ್ಗೆ ಕಾರ್ಯಗತಗೊಳಿಸದಿರಲು ಕಾರಣವೇನು ?

ಈ) ಈಗಲಾದರೂ ಕುಡಿಯುವ ನೀರಿನ ಸಮಸ್ಯೆಯನ್ನು ಹೋಗಲಾಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಎಂ. ಫಕೀರ್‌ಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)

ಅ) ಈಗಾಗಲೇ ಯೋಜನೆಯು ಪ್ರಗತಿಯಲ್ಲಿದೆ.

ಆ) 1993 ಜನವರಿವರೆವಿಗೆ ರೂ. 50,000 ಖರ್ಚಾಗಿದೆ.

ಇ) 1992–93ರ ಅನುಬಂಧ – 'ಇ' ನಲ್ಲಿ ಈ ಯೋಜನೆಯನ್ನು ರಾಜ್ಯ ವಲಯದಡಿ ಸೇರಿಸಲಾಗಿದೆ ಮತ್ತು ಇದನ್ನು ಕಾರ್ಯಗತಗೊಳಿಸಲು ಕ್ರಮವನ್ನು ಕೈಗೊಳ್ಳಲಾಗಿದೆ.